ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಮಾನವಿ.

**C.C. No. 633 /2019**

CW-9
PW-8

| | | |
|---|---|---|
| ಸಾಕ್ಷಿದಾರರ ಹೆಸರು | : | ನರಸಯ್ಯ |
| ತಂದೆಯ ಹೆಸರು | : | ಸಣ್ಣ ಯಲ್ಲಪ್ಪ |
| ವಯಸ್ಸು | : | 60 ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸ ಸ್ಥಳ | : | ಚೀಕರಪರವಿಕ್ಯಾಂಪ |

ದಿನಾಂಕ 18.06.2025 ರಂದು ಸತ್ಯ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ**

ಚಾಸಾ-1, 4 ರಿಂದ 8 ರವರ ಪರಿಚಯ ಇರುತ್ತದೆ. ಆರೋಪಿ ಪರಿಚಯ ಇರುವುದಿಲ್ಲ. ಈ ಪ್ರಕರಣದಲ್ಲಿ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಯಾರು ಯಾರಿಗೆ ಏನು ಮಾಡಿದರು , ಏನಾಯಿತು ನನಗೆ ಗೊತ್ತಿಲ್ಲ. ಆರೋಪಿಯು ಚಾಸಾ-4 ರವರಿಗೆ ಬೈದ ಬಗ್ಗೆ ಜೀವ ಬೆದರಿಕೆ ಹಾಕಿ ಎಳೆದಾಡಿ ಮಾನಕ್ಕೆ ಕಂದು ಉಂಟುಮಾಡಿಲ್ಲ . ನಾನು ಯಾವುದೇ ಹೇಳಿಕೆ ನೀಡಿಲ್ಲ. ಯಾವುದೇ ಕಿರುಕುಳ ನೀಡಿಲ್ಲ.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಬೇಕೆಂದು ಕೋರಿರುತ್ತಾರೆ. ಅಂತೆಯೇ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಮಾನ್ಯ ಸ.ಸ.ಅ. ರವರಿಂದಃ

ನಾನು, ನನ್ನ ಹಂಡತಿ ಮನೆಯಲ್ಲಿದ್ದಾಗ ಮ. 4.00ಕ್ಕೆ ಆರೋಪಿ ಬಂದು ಚಾ.ಸಾ. 4ರಿಗೆ ಹೋಗೋಣ ಎಂದು ಕರೆದನು ಎಂದರೆ ಸರಿಯಲ್ಲ. ಚಾ.ಸಾ.4 ಅದಕ್ಕೆ ಬರುವುದಿಲ್ಲ ಎಂದು ಹೇಳಿದ್ದಕ್ಕೆ ಅವರ ಕೈ ಹಿಡಿದು ಎಳೆದಾಡಿ ಅವಮಾನ ಮಾಡಿರುತ್ತಾನೆ ಎಂದರೆ ಸರಿಯಲ್ಲ ಅಂತ ಚಾಸಾ-5 ರವರು ತಿಳಿಸಿದರು ಎಂದರೆ ಸರಿಯಲ್ಲ. ಚಾಸಾ-5 ರವರು ಬಿಡಿಸಲು ಹೋದಾಗ ಆರೋಪಿ ಚಾಸಾ-4 ರವರಿಗೆ ಸೂಳೇ ಎಂದು ಅವಾಚ್ಯವಾಗಿ ಬೈದು, ತನ್ನ ಜೊತೆ ಬರದೇ ಇದ್ದರೆ ನಿನ್ನನ್ನು ಜೀವ ಸಹಿತ ಬಿಡುವುದಿಲ್ಲ ಎಂದು ಜೀವದ ಬೆದರಿಕೆ ಹಾಕಿರುತ್ತಾನೆ ಎಂದರೆ ಸರಿಯಲ್ಲ. ಆರೋಪಿತನ ಕಿರುಕುಳ ತಾಳಲಾರದೇ ಚಾ.ಸಾ. 4 ಮತ್ತು 5 ದಿ: 25-03-2019ರಂದು ಕ್ರಿಮಿನಾಶಕ ಸೇವನೆ ಮಾಡಿದ್ದರು ಎಂದರೆ ಸರಿಯಲ್ಲ. ಬಂದು ನೋಡಿದಾಗ ಮನೆಯಲ್ಲಿ ಇಬ್ಬರು ಹೊರಳಾಡುತ್ತಿದ್ದರು ಎಂದರೆ ಸರಿಯಲ್ಲ. ಅದೇ ರೀತಿಯಾಗಿ ಇಬ್ಬರು ಮಕ್ಕಳನ್ನು ಆಸ್ಪತ್ರೆಗೆ ಕರೆದುಕೊಂಡು ಹೋದ ಬಗ್ಗೆ ನನಗೆ ಗೊತ್ತಾಯಿತು ಎಂದರೆ ಸರಿಯಲ್ಲ. ಆ ಬಗ್ಗೆ ನಾನು ಪೊಲೀಸರ ಮುಂದೆ ಹೇಳಿಕೆ ನೀಡಿದ್ದೇನೆಂದರೆ ಸರಿಯಲ್ಲ. ಈಗ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿರಾಕರಿಸಿದ್ದರಿಂದ ಅದನ್ನು ನಿ.ಪಿ. 8 ಎಂದು

ಗುರುತಿಸಲಾಯಿತು.  ನಾನು ನಿ.ಪಿ. 8 ರಂತೆ ಹೇಳಿಕೆ ನೀಡಿದ್ದರೂ ಆರೋಪಿತನಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರೊಂದಿಗೆ ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿ ಪರ ಮಾನ್ಯ ವಕೀಲರಿಂದಃ** ಪಾಟೀ ಸವಾಲು ಇರುವುದಿಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆಃ** ಇಲ್ಲ.

(ನನ್ನ ಉಕ್ತಲೇಖದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿರುತ್ತದೆ.)

ಓ.ಹೇ.ಕೆ.ಸರಿ ಇದೆ

ಪ್ರ.ದ.ನ್ಯಾ.ದಂ.ಗಳು, **ಮಾನ್ವಿ**